ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಪ್ರಸಕ್ತ ಸಾಲಿನಲ್ಲಿ ಹೊಸ ವಸತಿ ಯೋಜನೆಗಳನ್ನು ರೂಪಿಸುವ ಕುರಿತು

ಶ್ರೀ ಹೆಚ್. ಎಂ. ರಮೇಶ್‌ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) -

1089 (1187) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಯೋಜನೆಗಳ ಮೂಲಕ ಬಡವರಿಗೆ ಮನೆಗಳನ್ನು ಹಂಚುವ ಕಾರ್ಯಕ್ರಮ ರೂಪಿಸಲಾಗಿದೆ; (ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಿಂದ ನಿರ್ಮಾಣವಾಗದೇ ಉಳಿದಿರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಅಂತಿಮ ಗಡುವು ನಿಗದಿಪಡಿಸಿದೆಯೇ;

(ಇ) ವಸತಿ ಇಲಾಖೆಯಡಿ ನಿರ್ಮಾಣವಾಗುವ ಮನೆಗಳ ಗುಣಮಟ್ಟದ ಕುರಿತು ಪ್ರಶ್ನೆಗಳು ಎದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಕಳಪೆ ಗುಣಮಟ್ಟದ ಮನೆಗಳನ್ನು ನಿರ್ಮಿಸಿದರೆ ಸಂಬಂಧಪಟ್ಟ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ?